(Amendment) Act, 1997" the words, brackets and figures "within three years from the date of commencement of the Karnataka Land Revenue (Amendment) Act, 2000 shall be substituted."

The motion was adopted

ಖಂಡ 2 ತಿದ್ದುಪಡಿಯಾದ ರೀತಿಯಲ್ಲಿ

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಖಂಡ 2 ತಿದ್ದುಪಡಿಯಾದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಖಂಡ 2 ತಿದ್ದುಪಡಿಯಾದಂತೆ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು):- ಮಾನ್ಯ ಉಪಾಧ್ಯಕ್ಷರೇ, 2000ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು:-ಪ್ರಸ್ತಾವ ಏನೆಂದರೆ,

"2000ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಈ ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ)

ವಿಧೇಯಕ, 2000

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಡಿ. ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, 2000ನೇ ಸಾಲಿನ ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಕೆ. ಶ್ರೀನಿವಾಸಗೌಡ : ವಿರೋಧ ಪಕ್ಷದವರಾಗಿ ಈ ವಿಧೇಯಕ ಸ್ವಾಗತಿಸಿದ್ದಕ್ಕೆ ನಿಮ್ಮನ್ನು ಅಭಿನಂದಿಸಬೇಕು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"2000ನೇ ಸಾಲಿನ ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು : "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ವಿಧೇಯಕದ ಅಂಗವಾಯಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷರೇ, 2000ನೇ ಸಾಲಿನ ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"2000ನೇ ಸಾಲಿನ ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗದಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಉಪಾಧ್ಯಕ್ಷರು : ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕ, 2000ನ್ನು ಮಂಗಳವಾರ ಚರ್ಚೆಗೆ ತೆಗೆದುಕೊಳ್ಳೋಣ. ಈಗ ಸಭೆಯು ಮುಕ್ತಾಯವಾಗಿ ಪುನಃ ದಿನಾಂಕ 17ನೇ ಏಪ್ರಿಲ್ 2000ರ ಸೋಮವಾರ ಬೆಳಿಗ್ಗೆ 10 ಗಂಟೆಗೆ ಸೇರುವುದು.

(ಸದನವು ಮಧ್ಯಾಹ್ನ 2 ಗಂಟೆ 11 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 17ನೇ ಏಪ್ರಿಲ್ 2000ರ ಸೋಮವಾರದಂದು ಬೆಳಿಗ್ಗೆ 10 ಗಂಟೆಗೆ ಸೇರಲು ನಿಶ್ಚಯಿಸಿತು)

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.)

ಕರ್ನಾಟಕ ವಿಧಾನಸಭೆ

ಸೋಮವಾರ 17ನೇ ಏಪ್ರಿಲ್ 2000ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ

ಸಭಾಂಗಣದಲ್ಲಿ ಬೆಳಿಗ್ಗೆ 10-20 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು: (ಶ್ರೀ ಎಂ. ವಿ. ವೆಂಕಟಪ್ಪ) ಅವರು,

ಪೀಠವನ್ನು ಅಲಂಕರಿಸಿದ್ದರು.

1. ಪ್ರಶ್ನೋತ್ತರಗಳು

ಅ) ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು